ಕ್ರಾಂತಿಯಕಿಡಿ
ಶನಿವಾರ
24 ಜುಲೈ 2021
ಕಾಯಕಯೋಗಿ
KAYAKAYOGI-MORNING DAILY
ಕನ್ನಡ ದಿನಪತ್ರಿಕೆ

ಮಕ್ಕಳು, ಗರ್ಭಿಣಿಯರಿಗೆ ವಿತರಿಸುವ ಮೊಟ್ಟೆಯಲ್ಲಿ ಅಕ್ರಮದ ಡೀಲ್ : ಸಚಿವೆ ಶಶಿಕಲಾ ಜೊಲ್ಲೆ ಭ್ರಷ್ಟಾಚಾರ ಬಯಲು

ಬೆಂಗಳೂರು : ಅಂಗನವಾಡಿ ಮೂಲಕ ವಿತರಿಸಲಾಗಿರುವ ಮೊಟ್ಟೆ ಪೂರೈಕೆ ಟೆಂಡರ್ ಗಾಗಿ ದೊಡ್ಡ ಸೀಲ್ ನಡೆದಿದ್ದು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶಶಿಕಲಾ ಜೊಲ್ಲೆ ಅವರೇ ಈ ಡೀಲ್ ಗೆ ಒಪ್ಪಿಕೊಂಡಿದ್ದಾರೆ ಎಂಬ ಸ್ಫೋಟಕ ಮಾಹಿತಿ ಬಯಲಾಗಿದೆ. ಗರ್ಭಿಣಿಯರಿಗೆ, ಅಪೌಷ್ಟಿಕ ಮಕ್ಕಳಿಗೆ ನೀಡಲಾಗುವ ಮಾತೃಪೂರ್ಣ ಮೊಟ್ಟೆ ಟೆಂಡರ್ ಪ್ರಕ್ರಿಯೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮುಂದಾಗಿತ್ತು.

ಆದರೆ ಈ ಟೆಂಡರ್ ನ್ನು ತಮಗೆ ಬೇಕಾದವರಿಗೆ ನೀಡಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶಶಿಕಲಾ ಜೊಲ್ಲೆ ಮುಂದಾಗಿದ್ದರು ಎಂಬ ಆರೋಪ ಕೇಳಿ ಬಂದಿದೆ. ಈ ಮೊದಲು ಅಂಗನವಾಡಿಯಿಂದಲೇ ನೇರವಾಗಿ ಮೊಟ್ಟೆ ವಿರೀದಿ ಮಾಡಿ ಮಕ್ಕಳು ಹಾಗೂ ಗರ್ಭಿಣಿಯರಿಗೆ ನೀಡಲಾಗಿತ್ತು, ಆದರೆ ಹಣ ಮಾಡುವ

ಉದ್ದೇಶದಿಂದ ಸಚಿವೆ ಶಶಿಕಲಾ ಜೊಲ್ಲೆ ಟೆಂಡರ್ ಮೂಲಕ ಮೊಟ್ಟೆ ವಿರೀದಿ ಮಾಡುವ ಪ್ರಕ್ರಿಯೆಗೆ ಮುಂದಾಗಿದ್ದರು. ಆ ಮೂಲಕ ಬಡವರ ಯೋಜನೆಯಲ್ಲಿ ಅಕ್ರಮಕ್ಕೆ ಕಮಿಷನ್ ಪಡೆಯಲು ಮುಂದಾಗಿದ್ದರು ಎನ್ನಲಾಗಿದೆ.

ಅಂಗನವಾಡಿ ಮೂಲಕ ವಿತರಿಸಲಾಗಿರುವ ಮೊಟ್ಟೆ ಪೂರೈಕೆ ಟೆಂಡರ್ ಗಾಗಿ ದೊಡ್ಡ ಡೀಲ್ ನಡೆದಿದ್ದು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶಶಿಕಲಾ ಜೊಲ್ಲೆ ಅವರೇ ಈ ಡೀಲ್ ಗೆ ಒಪ್ಪಿಕೊಂಡಿದ್ದಾರೆ ಎಂಬ ಸ್ಫೋಟಕ ಮಾಹಿತಿ ಬಯಲಾಗಿದೆ. ಅಲ್ಲದೇ ಸಚಿವೆಯ ಅಕ್ರಮಕ್ಕೆ ಶಾಸಕ ಪರಣ್ಣ ಮುನವಳ್ಳಿ ಕೂಡ ಸಾಥ್ ನೀಡಿದ್ದಾರೆ ಎಂಬ ಆರೋಪ ಕೇಳಬಂದಿದೆ.

ಇಂದು ಮೈಸೂರಿನಲ್ಲಿ ಅಕ್ಕಮಹಾದೇವಿ ಸಂಗೀತ ಶಾಲೆ ಉದ್ಘಾಟನೆ

ಮೈಸೂರು : ಶ್ರೀ ಗುರು ಬಸವ ಮಹಾಮನೆ, ಮನುಗುಂಡಿ, ಧಾರವಾಡ ಜಿಲ್ಲೆ ಇವರ ವತಿಯಿಂದ ಮೈಸೂರಿನ ವೀವೇಕಾನಂದ ವೃತ್ತದ ಹತ್ತಿರದ ನಿಮಿಷಾಂಭ ಬಡಾವಣೆಯ ನಂ 333, ಸಾಯಿರಾಮ, 9 ನೇ ಅಡ್ಡರಸ್ತೆ, ಇಲ್ಲಿ ಅಕ್ಕಮಹಾದೇವಿ ಸಂಗೀತ ಶಾಲೆ ಪ್ರಾರಂಭವಾಗುತ್ತಿದ್ದು, ಇದರ ಉದ್ಘಾಟನಾ ಸಮಾರಂಭ 24.7.2021 ನೇ ಶನಿವಾರ ಸಂಜೆ 5 ಗಂಟೆಗೆ ನಡೆಯಲಿದ್ದು, ಕಾರ್ಯಕ್ರಮದ ದಿವ್ಯಸಾನ್ನಿಧ್ಯವನ್ನು ಶ್ರೀ ಗುರುಬಸವ ಮಹಾಮನೆ, ಮನುಗುಂಡಿ, ಧಾರವಾಡ ಜಿಲ್ಲೆಯ ಪೂಜ್ಯ ಶ್ರೀ ಬಸವಾನಂದಮಹಾಸ್ವಾಮಿಗಳು ವಹಿಸಲಿದ್ದು, ಸಮ್ಮುಖವನ್ನು ಮೈಸೂರು ಬಸವ ಕೇಂದ್ರದ ಪೂಜ್ಯ ಶ್ರೀ ಬಸವಯೋಗಿಪ್ರಭುಗಳು ವಹಿಸಲಿದ್ದು, ಕಾರ್ಯಕ್ರಮದ ಉದ್ಘಾಟನೆಯನ್ನು ಹೆಸರಾಂತ ಸಾಹಿತಿಗಳಾದ ಪ್ರೊ.ಎಂ.ಕೃಷ್ಣೇಗೌಡರವರು ನೆರವೇರಿಸಲಿದ್ದು, ಶ್ರೀ ಸುಂದರ್ ರಾಜ್ ಮತ್ತು ಶ್ರೀ ಗಂಗಾಧರ ಗುರುಮಠರವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ವಕೀಲ ರವಿಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅನಿಕೇತನ ಲಯನ್ಸ್ ಕ್ಲಬ್ ಉದ್ಘಾಟನೆ

ಹಲಗೂರು : ಅಂತಾರಾಷ್ಟ್ರೀಯ ಸಂಸ್ಥೆ ವತಿಯಿಂದ ನೂತನ ಹಲಗೂರು ಅನಿಕೇತನ ಲಯನ್ಸ್ ಕ್ಲಬ್ ಉದ್ಘಾಟನಾ ಕಾರ್ಯಕ್ರಮ ಜೆಪಿಎಂ ಕಾಲೇಜು ಆವರಣದಲ್ಲಿ ನಡೆಯಿತು.

ಕಾರ್ಯಕ್ರಮವನ್ನು ಜಿಲ್ಲಾ ರಾಜ್ಯಪಾಲ ದೇವೇಗೌಡ ರವರು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಹಲಗೂರಿನಲ್ಲಿ ನೂತನವಾಗಿ 2ನೇ ಲಯನ್ಸ್ ಕ್ಲಬ್ ಪ್ರಾರಂಭ ಮಾಡಿದಿರಿ. ಉತ್ತಮ ಸೇವಾ ಚಟುವಟಿಕೆಗಳ ಮಾಡುವ ಮುಖಾಂತರ ಸಂಸ್ಥೆಯನ್ನು ಬೆಳೆಸಬೇಕು. ಹಲಗೂರು ಹಳೆಯ ಲಯನ್ಸ್ ಕ್ಲಬ್ ಪ್ರಾರಂಭವಾಗಿ ಸುಮಾರು ನಲವತ್ತು ವರ್ಷಗಳಾಯಿತು. ಅವರು ಸಹ ಉತ್ತಮ ಸೇವೆ ಸಲ್ಲಿಸಿದ್ದಾರೆ. ನಿಮ್ಮ ಲಯನ್ಸ್ ಕ್ಲಬ್‌ಗೆ ಶುಭವಾಗಲಿ ಎಂದು ಹಾರೈಸಿದರು.

ನೂತನ ಸದಸ್ಯರಿಗೆ ಪದಗ್ರಹಣ ಕಾರ್ಯ ಕ್ರಮ ನಡೆಯಿತು. ಹಲಗೂರು ನೂತನ ಲಯನ್ಸ್ ಕ್ಲಬ್‌ನ ಅಧ್ಯಕ್ಷರಾಗಿ ವೀರಣ್ಣಗೌಡ, ಕಾರ್ಯದರ್ಶಿ ವೆಂಕಟೇಶ್, ಖಜಾಂಚಿಯಾಗಿ ಭಾಸ್ಕರ್, ಎಲ್ಲಾ ಸದಸ್ಯರ ನೂತನ ಸದಸ್ಯರಿಗೂ ಪಿನ್ ಹಾಕಿದರು.

ಮಾಜಿ ರಾಜ್ಯಪಾಲರಾದ ರಮೇಶ್ ಮಾತನಾಡಿ, ಮಂಡ್ಯ ಜಿಲ್ಲೆಯಲ್ಲಿ ಕೆವಲ 5 ಲಯನ್ಸ್ ಕ್ಲಬ್ ಗಳಿದ್ದವು ಇಂದು ಮಂಡ್ಯ ಜಿಲ್ಲೆಯಲ್ಲಿ ನಲವತ್ತು ಲಯನ್ಸ್ ಕ್ಲಬ್‌ಗಳನ್ನು ಪ್ರಾರಂಭಿಸಿದ್ದೇವೆ. ಮಾಜಿ ರಾಜ್ಯಪಾಲರಾದ ದೇವೇಗೌಡರು, ಶಂಕರಲಿಂಗೇಗೌಡ, ಕೃಷ್ಣೇಗೌಡ, ಸುಬ್ರಹ್ಮಣ್ಯ ಮಂಡ್ಯ ಜಿಲ್ಲೆಯ ಲಯನ್ಸ್ ಸದಸ್ಯರು ಕೂಡ ನನ್ನ ಅವಧಿಯಲ್ಲಿ ಉತ್ತಮ ಬೆಂಬಲ ನೀಡಿದರು ಅವರಿಗೆ ಧನ್ಯವಾದಗಳು ಎಂದರು .

ಹಲಗೂರು ಲಯನ್ಸ್ ಕ್ಲಬ್‌ನ ನೂತನ ಅಧ್ಯಕ್ಷರಾದ ವೀರಣ್ಣ ಗೌಡರು ಮಾತನಾಡಿ, ಹಲಗೂರಿನಲ್ಲಿ ನೂತನ ಕ್ಲಬ್ ಪ್ರಾರಂಭಿಸಲು ನಮ್ಮ ಸ್ನೇಹಿತರು ಕಾರಣ. ಕೊರಳಿನ ಬಂದ ಕಾರಣದಿಂದ ತಡವಾಯಿತು. ತಾನು ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾದ ನಂತರ ಸಮಾಜ ಸೇವೆ ಮಾಡಲು ನಿರ್ಧರಿಸಿದ್ದೇವೆ. ನಾನೊಬ್ಬನೇ ಅಧ್ಯಕ್ಷ ಅಲ್ಲ ಎಲ್ಲಾ ಸದಸ್ಯರು ಕೂಡ ಅಧ್ಯಕ್ಷರೇ ದಯ ಮಾಡಿ ನಿಮ್ಮಲ್ಲಿರ ಬೆಂಬಲ ನಮಗಿರಲಿ. ಲಯನ್ಸ್ ಅಧ್ಯಕ್ಷ ಎಂದರೆ ಕೇವಲ 1 ವರ್ಷ ಮಾತ್ರ ಮುಂದಿನ ದಿನಗಳಲ್ಲಿ ಉತ್ತಮ ಸೇವೆ ಸಲ್ಲಿಸೋಣ ಎಂದರು. ಹನುಮಂತಯ್ಯ, ಸುಬ್ರಹ್ಮಣ್ಯ, ಕೃಷ್ಣೇಗೌಡ, ಲಯನ್ ಮೋಹನ್ ಕುಮಾರ್, ಹರ್ಷ, ರಾಜಶೇಖರ್ ಇದ್ದರು.

ಮಾದಪ್ಪನ ಹುಂಡಿಗೆ 2.33 ಕೋಟಿ ಸಂಗ್ರಹ

ಚಾಮರಾಜನಗರ : ಜಿಲ್ಲೆಯ ಪ್ರಸಿದ್ಧ ಯಾತ್ರಾ ಸ್ಥಳವಾದ ಹನೂರು ತಾಲ್ಲೂಕಿನ ಶ್ರೀ ಮಲೆಮಹದೇಶ್ವರ ಬೆಟ್ಟದಲ್ಲಿ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು, 2.33 ಕೋಟಿ ರೂ. ಸಂಗ್ರಹವಾಗಿದೆ ಎಂದು ಪ್ರಾಧಿಕಾರದ ಕಾರ್ಯದರ್ಶಿ ಜಯವಿಭವಸ್ವಾಮಿ ಅವರು ತಿಳಿಸಿದ್ದಾರೆ.

47 ದಿನಗಳಲ್ಲೇ 2,33,57,28 ಕೋಟಿ ರೂ. ಸಂಗ್ರಹವಾಗಿರುವುದು ವಿಶೇಷವಾಗಿದೆ. ಹುಂಡಿಯಲ್ಲಿ 155 ಗ್ರಾಂ ಚಿನ್ನ, 2.2 ಕೆಜಿ ಬೆಳ್ಳಿಯನ್ನು ಭಕ್ತರು ಮಾದಪ್ಪನಿಗೆ ಅರ್ಪಿಸಿದ್ದಾರೆ. 122 ದಿನಗಳ ಬಳಿಕ ಹುಂಡಿ ಹಣ ಎಣಿಕೆ ಕಾರ್ಯ ನಡೆದಿದ್ದು ಇದರಲ್ಲಿ ಕೊರೊನಾ ಲಾಕ್‌ಡೌನ್ ಪರಿಣಾಮ 75 ದಿನಗಳ ಕಾಲ ದೇವಾಲಯ ಬಂದ್ ಮಾಡಲಾಗಿತ್ತು.

ಕಡ್ಡಾಯ ಹಾಜರಾಗಲು ಅಧಿಕಾರಿಗಳಿಗೆ ಸೂಚನೆ

ಪಾಂಡವಪುರ : ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ನಡೆಯುವ ಕೆಡಿಪಿ ಸಭೆಗೆ ಕಿರಿಯ ಅಧಿಕಾರಿಗಳನ್ನು ನಿಯೋಜಿಸದೇ ತಾಲೂಕು ಮಟ್ಟದ ಅಧಿಕಾರಿಗಳೇ ತಪ್ಪದೇ ಕಡ್ಡಾಯವಾಗಿ ಹಾಜರಾಗಬೇಕು ಎಂದು ತಾಲೂಕು ಪಂಚಾಯಿತಿ ಆಡಳಿತಾಧಿಕಾರಿಯಾದ ಆರ್ ಕೃಷಿ ಜಂಟಿ ನಿರ್ದೇಶಕ ಬಿ.ಎಸ್.ಚಿಂದ್ರಶೇಖರ್ ಸೂಚಿಸಿದರು.

ಪಟ್ಟಣದ ತಾ.ಪಂ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರ್ಥ ಫಲಾನುಭವಿಗಳನ್ನು ಗುರುತಿಸುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಗಳಲ್ಲಿ ನಡೆಯುವ ಕೆಡಿಪಿ ಸಭೆ ಮಹತ್ವದ್ದಾಗಿರುತ್ತದೆ. ಜತೆಗೆ ತಾಲೂಕು ಮಟ್ಟದ ಅಧಿಕಾರಿಗಳಿಂದ ಕೆಲಸ ಆಗಬೇಕಿರುವುದರಿಂದ ಅಧಿಕಾರಿಗಳು ಖುದ್ದು ಹಾಜರಿರಬೇಕಾಗುತ್ತದೆ. ಜಿಲ್ಲಾಮಟ್ಟದಲ್ಲಿ ಸಭೆ ಸೇರಿದಂತೆ ಅನಿವಾರ್ಯ ಕೆಲಸಗಳಿದ್ದಲ್ಲಿ ಮಾತ್ರವೇ ಹೋಬಳಿ ಮಟ್ಟದ ಅಧಿಕಾರಿಗಳನ್ನು ಕೆಡಿಪಿ ಸಭೆಗೆ ನಿಯೋಜಿಸಬೇಕು. ಇಲ್ಲದಿದ್ದರೆ ಗಂಭೀರವಾಗಿ ಪರಿಗಣಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಅಧಿಕಾರಿಗಳು ನಿಧಾನಗತಿ ಕೆಲಸಕ್ಕೆ ಆಸ್ಪದ ನೀಡಬಾರದು. ತ್ವರಿತವಾಗಿ ಕೆಲಸ ಕಾರ್ಯಗಳನ್ನು ಮಾಡಬೇಕು. ಜತೆಗೆ ವಿವಿಧ ಇಲಾಖೆಗಳಲ್ಲಿ ಸಂಬಳ ಮತ್ತು ಅಭಿವೃದ್ಧಿಗೆ ಸಂಬಂಧಿಸಿದಂತೆ 10ರಿಂದ 8 ನಮೂನೆಗಳಲ್ಲಿ ಲಿಂಕ್ ಡಾಕ್ಯೂಮೆಂಟ್ ಕೊಡಬೇಕು. ಲಿಂಕ್ ಡಾಕ್ಯುಮೆಂಟ್ ತಪ್ಪಿದ್ದರೆ ಮರು ಪರಿಶೀಲಿಸಿ ಇಒಗೆ ನೀಡಬೇಕು ಎಂದು ಸಲಹೆ ನೀಡಿದರು.

ನರೇಗಾದಲ್ಲಿ ಹೆಚ್ಚು ಗುರಿ ಸಾಧನೆ ಮಾಡಬೇಕು. ಆ ಮೂಲಕ ಎರಡನೇ ಸ್ಥಾನದಲ್ಲಿರುವ ಪಾಂಡವಪುರ ತಾಲೂಕನ್ನು ಮೊದಲ ಸ್ಥಾನಕ್ಕೆ ಕೊಂಡೊಯ್ಯಬೇಕು. ರಸ್ತೆ, ಕಟ್ಟಡ, ಚರಡಿ ನಿರ್ಮಾಣ ಸೇರಿದಂತೆ ಅಭಿವೃದ್ಧಿ ಕೆಲಸಕ್ಕೆ ಆಯಾಯ ಇಲಾಖೆಯ ಕ್ರಿಯಾಯೋಜನೆಗೆ ಅನುಮೋದನೆ ಪಡೆದುಕೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ಪಶು ಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಬಿ.ಪ್ರವೀಣ್‌ಕುಮಾರ್ ಮಾತನಾಡಿ, ನಮ್ಮ ಕಚೇರಿಯ ಕಾಂಪೌಂಡ್ ಶಿಥಿಲವಾಗಿದ್ದು, ರಾತ್ರಿ ವೇಳೆಯಲ್ಲಿ ಅಕ್ರಮ ಚಟುವಟಿಕೆಗಳು ನಡೆಯುವ ಕಾರಣ ಸಿಸಿಟಿವಿ ಅಳವಡಿಕೆಗೆ ಅನುಮತಿ ನೀಡಬೇಕು ಎಂದರು.

ಸಭೆಯಲ್ಲಿ ಕೃಷಿ, ತೋಟಗಾರಿಕೆ, ರೇಷ್ಮೇ, ಪಶುಪಾಲನೆ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು. ತಾ.ಪಂ ಸದಸ್ಯರ ಅವಧಿ ಅಂತ್ಯಗೊಂಡ ಹಿನ್ನೆಲೆ ಇದೇ ಮೊದಲ ಬಾರಿಗೆ ಸ್ಥಳೀಯ ಜನಪ್ರತಿನಿಧಿಗಳಲ್ಲದೇ ಆಡಳಿತಾಧಿಕಾರಿಗಳ ನೇತೃತ್ವದಲ್ಲಿ ನಡೆದ ಸಾಮಾನ್ಯ ಸಭೆ ಚರ್ಚೆಗೆ ಅವಕಾಶವಿಲ್ಲದೇ ನೀರಸದಿಂದಲೇ ಮುಕ್ತಾಯಗೊಂಡಿತು.

ಸಭೆಯಲ್ಲಿ ಇಒ ಆರ್.ಪಿ.ಮಹೇಶ್, ತಾಲೂಕು ಮಟ್ಟದ ಅಧಿಕಾರಿಗಳಾದ ತೋಟಗಾರಿಕೆ ಸಹಾಯಕ ನಿರ್ದೇಶಕಿ ಎಸ್.ಪಿ. ಸೌಮ್ಯ, ಸಹಾಯಕ ಕೃಷಿ ನಿರ್ದೇಶಕಿ ಪ್ರಿಯದರ್ಶಿನಿ, ಪಶು ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಬಿ.ಪ್ರವೀಣ್‌ಕುಮಾರ್ ಇತರರಿದ್ದರು.

ಗುರುವಿನ ಗುಲಾಮನಾಗುವ ತನಕ ದೊರೆಯದಣ್ಣ ಮುಕುತಿ

ಕಾಡ ಕಲ್ಲಿನಂತೆ, ಜಿಡ್ಡಿನ ಮಣ್ಣಿನಂತೆ,
ಆಕಾರವಿರದ ವಿಕಾರಕೆ ಜ್ಞಾನವೆರೆದ ಮೊದಲ ಗುರು ನನ್ನ ಜನಕಗೆ,ಸಂಸ್ಕಾರವೆರೆದ ಮಾತೆಗೆ ಹಾಗೂ ನನ್ನ ಶಿಕ್ಷಣ ಕ್ಷೇತ್ರದ,ಸಾಹಿತ್ಯಕ ಕ್ಷೇತ್ರದ, ಆಧ್ಯಾತ್ಮಿಕ ಕ್ಷೇತ್ರದಲ್ಲೊಳಗೊಂಡಂತೆ ಮಾರ್ಗದರ್ಶನ ತೋರಿದ ನನ್ನೆಲ್ಲಾ ಗುರುಗಳ ಪಾದಗಳಿಗೆ ಈ ಲೇಖನ ಅರ್ಪಿಸುತ್ತಾ.....

ಇಂದು ವಿಶೇಷವಾದ ದಿನ ಗುರುವಿನ ಆರಾಧನೆಯ ದಿನ

ಆಷಾಢ ಮಾಸದ ಹುಣ್ಣಿಮೆಯ ದಿನ ನಾವು ಆಚರಿಸುವ ಶ್ರೇಷ್ಠವಾದ ಹಬ್ಬವೆಂದರೆ "ಗುರು ಪೂರ್ಣಿಮೆ" . ಈ ದಿನ ನಾವು ನಮ್ಮ ಗುರುಗಳಿಗೆ ವಂದನೆ ಸಲ್ಲಿಸುವ ದಿನ. ಗುರುವಿನ ಮಹತ್ವವನ್ನು ಸಾರುವ ದಿನ. ಗುರು ನಮಗೆ ಜೀವನದಲ್ಲಿ ಸರಿಯಾದ ದಿಕ್ಕು ಸೂಚಿಸುವ, ನಮ್ಮ ಕೈ ಹಿಡಿದು ನಡೆಸುವ, ಪರಮಾತ್ಮನ ಅರಿವನ್ನು ತಿಳಿಯಲು ನಮ್ಮೊಳಗಿರುವ ನಮ್ಮ ಆತ್ಮವನ್ನು ಜಾಗೃತಿಗೊಳಿಸುವ ಮಹತ್ವದ ವ್ಯಕ್ತಿ, ಆಧ್ಯಾತ್ಮದ ಹಾದಿಯಲ್ಲಿ ನಮ್ಮನ್ನು ನಡೆಸಿ, ನಮ್ಮ ಗುರಿ ಮುಟ್ಟಲು ಸಹಾಯ ಮಾಡುವವನೇ "ಗುರು". ಹುಡುಕಿದರೆ ಸಿಗುವವನಲ್ಲ ಗುರು, ನಮ್ಮನ್ನು ಹುಡುಕಿ, ನಾವು ಗುರುವನ್ನು ಕಾಣುವ ಮಟ್ಟಿಗೆ ಸಾಧನೆ ಮಾಡಿದ್ದರೆ ತಾನಾಗೇ ನಮ್ಮ ಬಳಿಗೆ ಬರುವವನು. ನಾವು ಗುರುವಿನ ಮುಖಾಂತರವೇ ಪರಮಾತ್ಮನ ಅರಿವು ಅರಿಯಬೇಕಾಗಿರುವುದರಿಂದ, ನಾವು ಆಷಾಢ ಪೌರ್ಣಮಿಯಂದು ಮಾತ್ರ ಗುರುವನ್ನು ಪೂಜಿಸದೆ.. ಅನು ದಿನ, ಅನು ಕ್ಷಣ, ಗುರುವನ್ನು ಅಂತರಂಗದಲ್ಲೇ ಪೂಜಿಸುತ್ತಾ ನಮ್ಮನ್ನು ನಾವು ಸಮರ್ಪಿಸಿಕೊಳ್ಳಬೇಕು. ಹೀಗೆ ನನ್ನದೇನೂ ಇಲ್ಲವೆಂಬ ಭಾವ ನಮ್ಮಲ್ಲಿ ಸದಾ ಜಾಗೃತವಾಗಿಟ್ಟುಕೊಂಡು, ಗುರುವಿನಲ್ಲಿ ಶರಣಾದರೆ ಮಾತ್ರ ನಮ್ಮ ಗುರಿ ಮುಟ್ಟುವ ಪ್ರಯತ್ನ ಸಫಲವಾಗುತ್ತದೆ.

ಉಪನಿಷತ್ತಿನ ಪ್ರಕಾರ "ಗು" ಎಂದರೆ ಅಂಧಕಾರವೆಂದೂ "ರು" ಎಂದರೆ ದೂರೀಕರಿಸುವವ ಅಥವಾ ಅಜ್ಞಾನದ ಅಂಧಕಾರವನ್ನು ನಿವಾರಿಸಿ ಜ್ಞಾನದ ಹಾದಿಗೆ ನಡೆಸುವವ ಎಂಬ ಅರ್ಥವಾಗುತ್ತದೆ. ಸಂಸ್ಕೃತದಲ್ಲಿ "ಗುರು" ಪದಕ್ಕೆ ಭಾರವಾದ ಎನ್ನುವ ಅರ್ಥವೂ ಇದೆಯೆನ್ನುತ್ತಾರೆ. ಯಾರು ಜ್ಞಾನದಿಂದ ಭಾರವಾಗಿರುವನೋ ಅವನೇ ಗುರು ಎಂದು ಅರ್ಥೈಸಬಹುದೇನೋ.

ಸ್ಕಂದ ಪುರಾಣದ "ಗುರುಗೀತೆ"ಯಲ್ಲಿ ಗುರುವನ್ನು ನಂದಾದೀಪದಂತೆ ಬೆಳಗುವ ಜ್ಯೋತಿಯಂತೆ ಎಂದು ಗುರುವಿನ ಹಿರಿಮೆಯನ್ನು ವಿಸ್ತಾರವಾಗಿ ತಿಳಿಸಿರಾಗಿದೆ :

ಅಖಂಡ ಮಂಡಲಾಕಾರಂ ವ್ಯಾಪ್ತಂ ಯೇನಾ ಚರಾಚರಂ
ತತ್ಪದಂ ದರ್ಶಿತಂ ಯೇನಾ ತಸ್ಮೈ ಶ್ರೀಗುರವೇ ನಮಃ ।

ಆದಿಗುರು ಶ್ರೀ ಶಂಕರಾಚಾರ್ಯರು ಗುರು ಸ್ತೋತ್ರವನ್ನು ಹೀಗೆ ಹೇಳುತ್ತಾರೆ:

ಗುರುರ್ಬ್ರಹ್ಮಾ ಗುರುರ್ವಿಷ್ಣುಃ । ಗುರುರ್ದೇವೋ ಮಹೇಶ್ವರಃ ।
ಗುರುಸ್ಸಾಕ್ಷಾತ್ ಪರಬ್ರಹ್ಮಃ । ತಸ್ಮೈ ಶ್ರೀ ಗುರವೇ ನಮಃ ॥

ಗುರುವು ಬ್ರಹ್ಮ, ವಿಷ್ಣು ಮತ್ತು ಮಹೇಶ್ವರನ ಸ್ವರೂಪಿಯಾಗಿದ್ದು, ಅದಕ್ಕೂ ಮಿಗಿಲಾದ ಪರಬ್ರಹ್ಮ ತತ್ತ್ವವೇ ಆಗಿದ್ದಾನೆ. ಅಂಥ ಗುರುವಿಗೆ ಪ್ರಣಾಮಗಳು ಎಂಬ ಅರ್ಥವಾಗುತ್ತದೆ.

ಅಜ್ಞಾನ ತಿಮಿರಾಂಧಸ್ಯ ಜ್ಞಾನಾಂಜನ ಶಲಾಕಯಾ ।
ಚಕ್ಷುರುನ್ಮೀಲಿತಂ ಯೇನ ತಸ್ಮೈ ಶ್ರೀ ಗುರವೇ ನಮಃ ॥

ಅಂದರೆ ನಮ್ಮಲ್ಲಿರುವ ಅಜ್ಞಾನವೆಂಬ ಕಣ್ಣಿಗೆ ಅಂಟಿದ ಅಂಧಕಾರವನ್ನು ಜ್ಞಾನವೆಂಬ ಕಡ್ಡಿಯಿಂದ ಗುಣಪಡಿಸಿ, ಶಿಷ್ಯನ ಏಳಿಗೆಗೆ ಬೇಕಾದ ಸೋಪಾನವನ್ನು ಹತ್ತಿಸುವ, ಸಾಧನೆಯ ಮಾರ್ಗದರ್ಶನ ಮಾಡುವ ಶ್ರೀ ಗುರುವಿಗೆ ವಂದನೆಗಳು.

ಹೀಗೆ ನಮ್ಮ ಪರಂಪರೆಯಲ್ಲಿ ಅನಾದಿ ಕಾಲದಿಂದಲೂ ಗುರುವಿನ ಮಹತ್ವವನ್ನು ಸಾರುತ್ತಾ

ನ ಗುರೋರಧಿಕಂ ತತ್ವಂ, ನ ಗುರೋರಧಿಕಂ ತಪಃ ।
ತತ್ವ ಜ್ಞಾನಾತ್ ಪರಂ ನಾಸ್ತಿ, ತಸ್ಮೈ ಶ್ರೀ ಗುರವೇ ನಮಃ ॥

ಅಂದರೆ ಗುರುವಿಗಿಂತ ಮೀರಿದ ತತ್ವ, ತಪಸ್ಸು ಬೇರೆ ಯಾವುದೂ ಇಲ್ಲ. ಜ್ಞಾನದ ದಾರಿದೀಪ ತೋರುವವನಾದ ಶ್ರೀ ಗುರುವೇ ನಿನಗೆ ವಂದನೆಗಳು ಎಂದು ಹೇಳಿದ್ದಾರೆ.

ಶಾಶ್ವತವಾದ ಆನಂದವನ್ನು ಹೊಂದುವುದು ಸದ್ಗುರುವಿನ ಅನುಗ್ರಹದಿಂದ ಮಾತ್ರವೇ ಸಾಧ್ಯವೆಂದು ಶ್ರೀ ಶಂಕರಾಚಾರ್ಯರು ತಮ್ಮ ಗುರ್ವಷ್ಟಕಮ್ ನಲ್ಲಿ ಕೂಡ ಹೀಗೆ ಹೇಳಿದ್ದಾರೆ :

ಶರೀರಂ ಸುರೂಪಂ ತಥಾ ವಾ ಕಲತ್ರಂ
ಯಶಶ್ಚಾರು ಚಿತ್ರಂ ಧನಂ ಮೇರುತುಲ್ಯಮ್ ॥1॥
ಕಲತ್ರಂ ಧನಂ ಪುತ್ರಪೌತ್ರಾದಿ ಸರ್ವಂ
ಗೃಹಂ ಬಾಂಧವಾಃ ಸರ್ವಮೇತದ್ಧಿ ಜಾತಮ್ ॥2॥

ನಮಗೆ ಸುಂದರ ಶರೀರ, ಅಪಾರ ಅಂತಸ್ತು, ಕೀರ್ತಿ, ಸಂಸಾರ ಎಲ್ಲವೂ ಇದ್ದರೂ ಗುರುವಿನ ಚರಣಗಳಲ್ಲಿ ಭಕ್ತಿ ಶ್ರದ್ಧೆ ಇಲ್ಲದವನಿಗೆ ಮೋಕ್ಷವಿಲ್ಲ.

ಷಡಂಗಾದಿವೇದೋ ಮುಖೇ ಶಾಸ್ತ್ರವಿದ್ಯಾ
ಕವಿತ್ವಾದಿ ಗದ್ಯಂ ಸುಪದ್ಯಂ ಕರೋತಿ ॥3॥

ವೇದ, ಶಾಸ್ತ್ರ ಪಾರಂಗತನಾಗಿ ಅನೇಕ ವಿದ್ಯೆಗಳನ್ನು ತಿಳಿದವನಾಗಿದ್ದರೂ ಕೂಡ ಸದ್ಗುರುವಿನ ಚರಣಗಳಲ್ಲಿ ನಿಷ್ಠೆ ಇಡದಿದ್ದರೆ ಮುಕ್ತಿಯಿಲ್ಲ.

ವಿದೇಶೇಷು ಮಾನ್ಯಃ ಸ್ವದೇಶೇಷು ಧನ್ಯಃ